**ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಅವರು ನಿಯಮ 330ರಡಿಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ-**

ಪ್ರಶ್ನೆ- ಬೆಂಗಳೂರಿನಂತಹ ಮಹಾನಗರದಲ್ಲಿ ತಂಬಾಕಿನಿಂದ ಉತ್ಪಾದನೆಯಾಗುತ್ತಿರುವ ಎಲ್ಲ ರೀತಿಯ ಉತ್ಪನ್ನಗಳು ವಾಣಿಜ್ಯ ಇಲಾಖೆಯವರನ್ನು ವಂಚಿಸಿ, ಮಾರಾಟ ತೆರಿಗೆಯನ್ನು ವಂಚಿಸಿ ಮನೆ ಮನೆಗಳಲ್ಲಿ ರಾಜಾ ರೋಷವಾಗಿ ಮಾರುತ್ತಿದ್ದಾರೆ ಪ್ರತಿ ವಾರ ಸೇಲ್ಸ್ ಟ್ಯಾಕ್ಸ್ ನವರು ಅಕ್ರಮವಾಗಿ ಮಾರಾಟ ಮಾಡುವವರ ಮನೆಗೆ ಜೀಪಿನಲ್ಲಿ ಬಂದು ಹಪ್ತಾ ವಸೂಲಿ ಮಾಡಿಕೊಂಡು ಹೋಗುತ್ತಿರುವುದು ಆಯಾ ವ್ಯಾಪ್ತಿಯ ಪೊಲೀಸರಿಗೂ ಗೊತ್ತಿದೆ ಇದರಿಂದ ಕೋಟಿ ಕೋಟಿ ತೆರಿಗೆ ವಂಚನೆಯಾಗುತ್ತಿದೆ ಆದರೆ ಸರ್ಕಾರ ಕಣ್ಣು ಮುಚ್ಚಿ ಕುಳಿತಿದೆ ಇದರಲ್ಲೂ ಸರ್ಕಾರ ಶಾಮೀಲಾಗಿದ್ದಾರೆಯೇ ಎಂಬ ಸಂಶಯ ಮೂಡುತ್ತಿದ್ದು ಈ ಬಗ್ಗೆ ಗುಪ್ತಚರ ಇಲಾಖೆಯವರು ಕಣ್ಣುಮುಚ್ಚಿ ಕುಳಿತಿರುವ ಬಗ್ಗೆ ಬೆಂಗಳೂರಿನ ಯಾವ ಯಾವ ಏರಿಯಾದಲ್ಲಿ ಈ ದಂಧೆ ನಡೆಯುತ್ತಿದೆ ಎಂಬುದರ ಬಗ್ಗೆ ವರದಿ ತರಿಸಿ ಇಂತಹ ತೆರಿಗೆ ವಂಚಕರ ಮೇಲೆ ಕ್ರಮ ಜರುಗಿಸುವ ಬಗ್ಗೆ.

ಉತ್ತರ-ಬೆಂಗಳೂರು ನಗರದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಾನೂನು ಬಾಹಿರ ತಂಬಾಕು ಉತ್ಪನ್ನಗಳ ಮಾರಾಟ ಮತ್ತು ಬಳಕೆ ಕುರಿತಂತೆ ದಾಳಿ ನಡೆಸಿ ಕೋಟ್ಪಾ ಕಾಯ್ದೆ ಅಡಿ ಕಳೆದ ಮೂರು ವರ್ಷಗಳಲ್ಲಿ ದಾಖಲಿಸಲಾದ ಪ್ರಕರಣಗಳ ವಿವರವನ್ನು ಈ ಕೆಳಕಂಡಂತೆ ನೀಡಲಾಗಿದೆ.

**ಬೆಂಗಳೂರು ನಗರದ ಪೊಲೀಸ್ ಠಾಣೆಗಳಲ್ಲಿ 2019 ರಿಂದ 2022(ಫೆಬ್ರವರಿ ವರೆಗೆ) ಕೋಟ್ಪಾ ಕಾಯ್ದೆಯಡಿಯಲ್ಲಿ ದಾಖಲಿಸಲಾದ ಪ್ರಕರಣಗಳ ವಿವರ.**

| ಕ್ರ ಸಂ. | ವರ್ಷ | Sec.4 | Sec.5 | Sec.6a | Sec.6b | Sec.7 | FINE AMOUNT Collected ರೂಗಳಲ್ಲಿ |
|---|---|---|---|---|---|---|---|
| 1 | 2019 | 32993 | 20 | 46 | 53 | 80 | 5887215 |
| 2 | 2020 | 17985 | 0 | 10 | 14 | 64 | 3544850 |
| 3 | 2021 | 14189 | 0 | 19 | 13 | 35 | 2828240 |
| 4 | 2022(ಫೆಬ್ರವರಿ) | 2618 | 0 | 2 | 0 | 0 | 510900 |
| | ಒಟ್ಟು | 67785 | 20 | 77 | 80 | 179 | 12771205 |

**ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾಯ್ದೆಯಡಿ ತೆಗೆದುಕೊಳ್ಳಲಾದ ಕ್ರಮಗಳ ಬಗ್ಗೆ ವಿವರಗಳು:**

- ಬೆಂಗಳೂರು ನಗರದ ಎಲ್ಲಾ ಪೊಲೀಸ್ ಠಾಣಾ ಸರಹದ್ದುಗಳಲ್ಲಿ ಕೋಟ್ಪಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವಂತೆ ಈಗಾಗಲೇ ಹಲವಾರು ಸಭೆ ಮತ್ತು ಜ್ಞಾಪನಗಳ ಮೂಲಕ ಸೂಚಿಸಲಾಗಿರುತ್ತದೆ. ಈ ಕಾಯ್ದೆ ಜಾರಿ ಬಗ್ಗೆ ಬಿಬಿಎಂಪಿ, ಆರೋಗ್ಯ ಇಲಾಖೆ ಮತ್ತಿತರೆ ಸಂಸ್ಥೆಗಳು ಹಾಗೂ ತಮ್ಮ ಅಧೀನ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಚರ್ಚಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ದಾಳಿ ನಡೆಸಿ ಕ್ರಮಕೈಗೊಳ್ಳಲಾಗುತ್ತಿದೆ.

➢ ಕೋಟ್ಪಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವಲ್ಲಿ, ಈಗಾಗಲೇ 100 ಮೀಟರ್ ವ್ಯಾಪ್ತಿಯ ಶಾಲೆ/ಕಾಲೇಜುಗಳ, ದೇವಸ್ಥಾನಗಳ ಬಳಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವವರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ ಹಾಗೂ ಕೋಟ್ಪಾ ಕಾಯ್ದೆ ಅನ್ವಯ ತಂಬಾಕು ಉತ್ಪನ್ನಗಳ ದುಷ್ಪರಿಣಾಮಗಳ ಭಿತ್ತಿ ಪತ್ರಗಳನ್ನು ಪ್ರದರ್ಶಿಸಿದ್ದು ಮತ್ತು 18 ವರ್ಷದೊಳಗಿನವರಿಗೆ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವವರ ವಿರುದ್ಧ ಮತ್ತು ಯಾವುದೇ ಸರ್ಕಾರದ ಅನುಮತಿಯಿಲ್ಲದೆ ಅಕ್ರಮವಾಗಿ ವಿದೇಶಿ ಸಿಗರೇಟ್‌ಗಳನ್ನು ಮಾರಾಟ ಮಾಡುವವರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.

➢ ಈಗಾಗಲೇ ಪ್ರತಿ ವಿಭಾಗಕ್ಕೆ ಒಬ್ಬರಂತೆ ಎಸಿಪಿ ದರ್ಜೆಯ ಅಧಿಕಾರಿಗಳನ್ನು ವಿಭಾಗಗಳ ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದ್ದು ಸದರಿ ನೋಡಲ್ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಪೊಲೀಸ್ ಠಾಣೆಗಳಲ್ಲಿ ಕೋಟ್ಪಾ ಕಾಯ್ದೆಯನ್ನು ಜಾರಿಗೊಳಿಸುವ ನಿಟ್ಟಿನಲ್ಲಿ, ಪ್ರಕರಣಗಳನ್ನು ದಾಖಲಿಸಿ, ಸಾರ್ವಜನಿಕರಲ್ಲಿ ಮತ್ತು ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳ ಸಭೆ ಏರ್ಪಡಿಸಿ, ಭಿತ್ತಿ ಪತ್ರಗಳ ಮೂಲಕ ಧೂಮಪಾನದ ದುಷ್ಪರಿಣಾಮಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವಂತೆ ಸೂಚಿಸಲಾಗಿದೆ.

---

HD 47 PCQ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು.